# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 43

**ಮಾನ್ಯ ಸದಸ್ಯರ ಹೆಸರು** : ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)

**ಉತ್ತರಿಸಬೇಕಾದ ದಿನಾಂಕ** : 13-12-2021

**ಉತ್ತರಿಸುವ ಸಚಿವರು** : ಪ್ರವಾಸೋದ್ಯಮ ಹಾಗೂ ಪರಿಸರ ಮತ್ತು ಜೀವಿ ಶಾಸ್ತ್ರ, ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಕೊಡವ ಹೆರಿಟೇಜ್ ಕೇಂದ್ರದ ಕಾಮಗಾರಿಯು ಯಾವ ಹಂತದಲ್ಲಿದೆ; | ಕೊಡಗು ಜಿಲ್ಲೆ ಮಡಿಕೇರಿಯಲ್ಲಿ ಕೊಡವ ಹೆರಿಟೇಜ್ ಕಟ್ಟಡದ ಕಾಮಗಾರಿಗೆ ಸಂಬಂಧಿಸಿದಂತೆ ಪ್ರಸ್ತುತ ಐನ್‌ಮನೆಗಳ ಮೇಲ್ಛಾವಣಿ ಕೆಲಸ ಪೂರ್ಣಗೊಂಡಿದ್ದು, ನೆಲಹಾಸು, ವಿದ್ಯುದ್ದೀಕರಣ ಹಾಗೂ ಇತರೆ ಕೆಲಸಗಳು ಪ್ರಗತಿಯಲ್ಲಿದೆ. |
| ಆ) | ಸದರಿ ಕಾಮಗಾರಿಯು ಅನುಮೋದನೆಗೊಂಡ ವರ್ಷ ಯಾವುದು; | ಸದರಿ ಕಾಮಗಾರಿಯು 2010-11ನೇ ಸಾಲಿನಲ್ಲಿ ಅನುಮೋದನೆಗೊಂಡಿರುತ್ತದೆ. |
| ಇ) | ಸದರಿ ಕಾಮಗಾರಿಗೆ ಮಂಜೂರಾಗಿರುವ, ಬಿಡುಗಡೆಯಾಗಿರುವ ಹಾಗೂ ವಿನಿಯೋಗಿಸಿರುವ ಅನುದಾನದ ವಿವರಗಳೇನು; | 1. ಮಂಜೂರಾಗಿರುವ ಪರಿಷ್ಕೃತ ಅಂದಾಜು ಮೊತ್ತ ರೂ.330.45 ಲಕ್ಷಗಳು.<br>2. ಪ್ರಸ್ತುತ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಹಾಗೂ ವಿನಿಯೋಗಿಸಿರುವ ಮೊತ್ತ ರೂ.253.54ಲಕ್ಷಗಳು. |
| ಈ) | ಈ ಕಾಮಗಾರಿಗೆ ಬಿಡುಗಡೆಯಾಗಬೇಕಾದ ಅನುದಾನ ಎಷ್ಟು; ಇದುವರೆಗೆ ಬಿಡುಗಡೆಯಾಗದೇ ಬಾಕಿ ಉಳಿದಿದೆ ಇದಕ್ಕೆ ಕಾರಣಗಳೇನು; | ಈ ಕಾಮಗಾರಿಗೆ ಬಿಡುಗಡೆಯಾಗಬೇಕಾದ ಅನುದಾನ ರೂ.76.91 ಲಕ್ಷಗಳು.<br><br>ಸದರಿ ಕಾಮಗಾರಿಯ ಅನುಷ್ಠಾನ ಸಂಸ್ಥೆಯಾದ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಕೊಡಗು ವಿಭಾಗ ರವರಿಂದ ದಿನಾಂಕ: 02.12.2021ರಂದು ಹಣಬಳಕೆ ಪ್ರಮಾಣ ಪತ್ರ ಬಂದಿರುತ್ತದೆ. ಈ ಸಂಬಂಧ ಐದನೇ ಕಂತಾಗಿ ದಿನಾಂಕ: 08-12-2021ರಂದು ರೂ 29.00 ಲಕ್ಷಗಳು ಬಿಡುಗಡೆ ಮಾಡಲು ಕ್ರಮವಹಿಸಲಾಗಿದೆ. |
| ಉ) | ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಿ, ಲೋಕಾರ್ಪಣೆ ಗೊಳಿಸಲಾಗುವುದು? | ಪ್ರಸ್ತುತ ಪ್ರಗತಿಯಲ್ಲಿರುವ ಕೊಡವ ಹೆರಿಟೇಜ್ ಕಟ್ಟಡ ಕಾಮಗಾರಿಯು ಬಹುತೇಕ ಪೂರ್ಣಗೊಳ್ಳುವ ಹಂತದಲ್ಲಿದ್ದು, ಡಿಸೆಂಬರ್-2021ರ ಅಂತ್ಯದೊಳಗೆ ಪೂರ್ಣಗೊಳಿಸಲು ಕ್ರಮವಹಿಸಲಾಗುವುದು ಎಂದು ಲೋಕೋಪಯೋಗಿ ಇಲಾಖೆ ಮಡಿಕೇರಿ ರವರು ತಿಳಿಸಿರುತ್ತಾರೆ. |

TOR 301 TDV 2021

(ಆನಂದ್ ಸಿಂಗ್)
ಪ್ರವಾಸೋದ್ಯಮ ಹಾಗೂ
ಪರಿಸರ ಮತ್ತು ಜೀವಿ ಶಾಸ್ತ್ರ, ಸಚಿವರು